**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿರವರ ನ್ಯಾಯಾಲಯ, ಮೂಡಿಗೆರೆ**

**ಸಿ.ಸಿ.ನಂಃ 401/2022**

**ಫಿರ್ಯಾದುದಾರಃ** ಶ್ರೀ ಟಿ.ಜಿ. ದೀಪಕ್
ಬಿನ್ ಟಿ.ಎನ್.ಚನ್ನಕೇಶವ,
ವಯಸ್ಸು ಸುಮಾರು 40 ವರ್ಷ,
ವಾಸಃತ್ರಿಪುರ ಗ್ರಾಮ, ಬೆಟ್ಟಗೆರೆ ಅಂಚೆ,
ಮೂಡಿಗೆರೆ ತಾಲ್ಲೂಕು.

**ವಿರುದ್ಧ**

**ಆರೋಪಿಃ** ಶ್ರೀ ಸೀರಾಜ್ ಬಿನ್ ಅಹಮ್ಮದ್ದ್ ಬಾವ
ವಯಸ್ಸು ಸುಮಾರು 40 ವರ್ಷ,
ವಾಸಃ ವೀರಭದ್ರೇಶ್ವರ ರೈಸ್ ಮಿಲ್,
ಕೆ.ಎಂ.ರಸ್ತೆ, ಬಣಕಲ್, ಮೂಡಿಗೆರೆ,
ಚಿಕ್ಕಮಗಳೂರು ಜಿಲ್ಲೆ.

*****

**ದಂಡ ಪ್ರಕ್ರಿಯಾ ಸಂಹಿತೆ ಕಲಂ 313 ರಡಿಯಲ್ಲಿ ಮಾಡಿಕೊಳ್ಳಲಾದ ಆರೋಪಿ ಹೇಳಿಕೆ**

ಪ್ರಶ್ನೆ.1) ಫಿರ್ಯಾದುದಾರರ ಪರ ಹಾಜರಾದ ಸಾಕ್ಷಿದಾರರ ಹೇಳಿಕೆಗಳನ್ನು ಕೇಳಿದ್ದೀರಾ?

ಆರೋಪಿಯ ಉತ್ತರಃ

ಪ್ರಶ್ನೆ.2) ಫ್ರಾಸಾ-1 ಶ್ರೀ ಟಿ.ಜಿ. ದೀಪಕ್ ರವರು ತಮ್ಮ ಮುಖ್ಯ ವಿಚಾರಣೆಯಲ್ಲಿ ಆರೋಪಿಯಾದ ನೀವು ನಿಮ್ಮ ಕುಟುಂಬದ ತುರ್ತು ಹಣದ ಅವಶ್ಯಕತೆಗಳಿಗೋಸ್ಕರ ಫಿರ್ಯಾದಿಯಿಂದ 3,45,000/- ರೂಪಾಯಿಗಳನ್ನು ಸಾಲವಾಗಿ ಪಡೆದಿರುತ್ತೀರಿ ಎಂದು ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನಿಮ್ಮ ಉತ್ತರವೇನು?

ಆರೋಪಿಯ ಉತ್ತರಃ

ಪ್ರಶ್ನೆ.3) ಫ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ ಆರೋಪಿಯಾದ ನೀವು ಸದರಿ ಹಣದ ಮರುಪಾವತಿ ಮಾಡುವ ಸಲುವಾಗಿ ನಿಮ್ಮ ಖಾತೆ ಹೊಂದಿರುವ ಕರ್ನಾಟಕ ಬ್ಯಾಂಕ್ ಲಿಮಿಟೆಟ್, ಬಣಕಲ್ ಶಾಖೆಯ ಚೆಕ್ ನಂ.430666, ದಿನಾಂಕಃ 05.05.2022, ರೂ.3,45,000/- ಎಂದು ನಮೂದಿಸಿ ನೀಡಿರುತ್ತೀರಿ ಎಂದು ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನಿಮ್ಮ ಉತ್ತರವೇನು?

ಆರೋಪಿಯ ಉತ್ತರಃ

ಪ್ರಶ್ನೆ.4)ಪಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ ನಂತರ ಸದರಿ ಚೆಕ್ಕನ್ನು ಅವರ ಖಾತೆ ಹೊಂದಿರುವ ಸದರಿ ಬ್ಯಾಂಕಿನಲ್ಲಿ ನಗದೀಕರಣಕ್ಕೆ ಹಾಜರುಪಡಿಸಿದ್ದು, ಆದರೆ ಸದರಿ ಚೆಕ್ಕು ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲ ಹಾಗೂ ನಿಮ್ಮ ಖಾತೆಯನ್ನು ನಿಷ್ಕ್ರಿಯಗೊಳಿಸಲಾಗಿದೆ ಎಂದು ದಿನಾಂಕಃ 05.05.2022 ರಂದು ಹಿಂದಿರುಗಿಸಿರುತ್ತಾರೆ ಎಂದು ನಿಮ್ಮ ವಿರುದ್ಧ ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನಿಮ್ಮ ಉತ್ತರವೇನು?

ಆರೋಪಿಯ ಉತ್ತರಃ

ಪ್ರಶ್ನೆ.5) ಫ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ ನಂತರ ದಿನಾಂಕಃ 05.05.2022 ರಂದು ನಿಮಗೆ ಕಾನೂನುಬದ್ಧ ನೋಟೀಸು ನೀಡಿದ್ದು, ಸದರಿ ನೋಟೀಸನ್ನು ನೀವು ಸ್ವೀಕರಿಸಿದ್ದರೂ ಸಹ ಹಣವನ್ನು ಪಾವತಿ ಮಾಡಿರುವುದಿಲ್ಲ ಮತ್ತು ಆ ನೋಟೀಸಿಗೆ ಯಾವುದೇ ಉತ್ತರ ನೀಡಿರುವುದಿಲ್ಲ ಎಂದು ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನಿಮ್ಮ ಉತ್ತರವೇನು?

ಆರೋಪಿಯ ಉತ್ತರಃ

ಪ್ರಶ್ನೆ.6) ನಿಮ್ಮಗೆ ಈ ಪ್ರಕರಣದ ಬಗ್ಗೆ ನ್ಯಾಯಾಲಯಕ್ಕೆ ಏನಾದರೂ ಹೇಳುವುದು ಇದೆಯೇ ?

ಆರೋಪಿಯ ಉತ್ತರಃ

ಪ್ರಶ್ನೆ.7) ನಿಮ್ಮ ಪರವಾಗಿ ಸಾಕ್ಷಿ ವಿಚಾರಣೆ ಇದೆಯೇ?

ಆರೋಪಿಯ ಉತ್ತರಃ

(ಮೇಲಿನ ಸಾಕ್ಷಿದಾರರ ಎಲ್ಲಾ ಹೇಳಿಕೆಗಳನ್ನು ಶೀಘ್ರಲಿಪಿಗಾರರಿಂದ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಿ, ನಾನೇ ಸ್ವತಃ ಆರೋಪಿಗೆ ಓದಿ ಹೇಳಿ, ಅವರು ಕೊಟ್ಟ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಂಡಿರುತ್ತೇನೆಂದು ಧೃಡಿಕರಿಸುತ್ತೇನೆ )

Sd/-

(ವಿಶ್ವನಾಥ್ ಎ.)
C/c ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ., ಮೂಡಿಗೆರೆ.

ಸ್ಥಳಃ ಮೂಡಿಗೆರೆ
ದಿನಾಂಕಃ 17.09.2024

ಆರೋಪಿಯ ಸಹಿಃ